ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020-21 ದಿನಾಂಕ : 10-10-2020

# ಮಾಧ್ಯಮ ಆಮಂತ್ರಣ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಪೂರ್ವ ವಲಯದ ಶಾಂತಿನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯ, ಶಾಂತಿನಗರ ಇಲ್ಲಿ ಕೋವಿಡ್ ಕೇರ್ ಸೆಂಟರ್‌ನ ಉದ್ಘಾಟನೆ :

ವಿ. ಸೋಮಣ್ಣ, ವಸತಿ ಸಚಿವರು

ದಿನಾಂಕ : 12-10-2020, ಸೋಮವಾರ, ಬೆಳಿಗ್ಗೆ : 11-00 ಗಂಟೆಗೆ

ಸ್ಥಳ : ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯ, ನಂ. 14 ಪ್ರೈಮ್ ರೋಸ್ ರಸ್ತೆ, ಶಾಂತಲಾನಗರ, ಬೆಂಗಳೂರು

## ಪತ್ರಿಕಾ ಪ್ರಕಟಣೆ

# ತಾತ್ಕಾಲಿಕ ಆಯ್ಕೆಪಟ್ಟಿ

ಬೆಂಗಳೂರು, ಅಕ್ಟೋಬರ್ 10 (ಕರ್ನಾಟಕ ವಾರ್ತೆ) :

ಕರ್ನಾಟಕ ಲೋಕಸೇವಾ ಆಯೋಗದಿಂದ ಅಧಿಸೂಚಿಸಲಾಗಿದ್ದ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯದಲ್ಲಿನ ಕಿರಿಯ ತರಬೇತಿ ಅಧಿಕಾರಿಗಳ ಅರ್ಕಿಟೆಕ್ಚರಲ್ ಅಸಿಸ್ಟೆಂಟ್ ವೃತ್ತಿಯ 7 ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಆಯೋಗದ ಅಂತರ್ಜಾಲ http://kpsc.kar.nic.in ದಲ್ಲಿ ಪ್ರಕಟಿಸಲಾಗಿದೆ. ಈ ಸಂಬಂಧ ಆಕ್ಷೇಪಣೆಗಳಿದ್ದಲ್ಲಿ 7 ದಿನಗಳೊಳಗಾಗಿ ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-01 ಇವರಿಗೆ ಸಲ್ಲಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.

## ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿ ಪ್ರಕಟ

**ಬೆಂಗಳೂರು, ಅಕ್ಟೋಬರ್ 10 (ಕರ್ನಾಟಕ ವಾರ್ತೆ) :**

ಕರ್ನಾಟಕ ಲೋಕಸೇವಾ ಆಯೋಗದಿಂದ ಅಧಿಸೂಚಿಸಲಾಗಿದ್ದ ಕರ್ನಾಟಕ ಮಾಲಿನ್ಯ ನಿಯಂತ್ರಣ ಮುಂಡಳಿಯಲ್ಲಿನ ಗ್ರೂಫ್ "ಸಿ" ವೃಂದದ ವೈಜ್ಞಾನಿಕ ಸಹಾಯಕ (04) ಪ್ರಥಮ ದರ್ಜೆ ಸಹಾಯಕರು(01) ದ್ವಿತೀಯ ದರ್ಜೆ ಸಹಾಯಕರು (04) ಹಾಗೂ ಕ್ಷೇತ್ರ ಸಹಾಯಕರು(05) ಒಟ್ಟು 14 (ಹೈ.ಕ.) ಹುದ್ದೆಗಳಿಗೆ ಸಂಬಂಧಿಸಿದಂತೆ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಮಾಹಿತಿಗಾಗಿ ಆಯೋಗದ ಅಂತರ್ಜಾಲ **http://kpsc.kar.nic.in** ದಲ್ಲಿ ಪ್ರಕಟಿಸಲಾಗಿದೆ ಎಂದು ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-01 ಇವರು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯವಸ್ಥಿತ ಕೆ.ಎಸ್.ಟಿ.ಡಿ.ಸಿ. ಪ್ರವಾಸಗಳು

**ಬೆಂಗಳೂರು, ಅಕ್ಟೋಬರ್ 10 (ಕರ್ನಾಟಕ ವಾರ್ತೆ) :**

ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮವು ರಾಜ್ಯಕ್ಕೆ ಆಗಮಿಸುವ ಪ್ರವಾಸಿಗರಿಗೆ ರಾಜ್ಯ ಹಾಗೂ ಅಂತರಾಜ್ಯದ ವಿವಿಧ ಪ್ರವಾಸಿ ತಾಣಗಳಿಗೆ ವ್ಯವಸ್ಥಿತ ಪ್ರವಾಸಗಳನ್ನು ಆಯೋಜಿಸುತ್ತಾ ಬಂದಿರುತ್ತದೆ. ಈ ನಿಟ್ಟಿನಲ್ಲಿ ನಿಗಮದಿಂದ ಪ್ರವಾಸಿಗರಿಗೆ ಉತ್ತರ ಕರ್ನಾಟಕ ಹೆರಿಟೇಜ್ ಟೂರ್ (ಉತ್ತರ ಕರ್ನಾಟಕ ಪಾರಂಪರಿಕ ಸ್ಥಳಗಳಾದ ಹಂಪಿ, ಬಾದಾಮಿ, ಪಟ್ಟದಕಲ್ಲು, ಐಹೊಳೆ, ಬಿಜಾಪುರ, ಕೂಡಲಸಂಗಮ) ಅನ್ನು ದಿನಾಂಕ 08-10-2020 ರಂದು ಪ್ರಾರಂಭ ಮಾಡಿದೆ. ಈ ಪ್ರವಾಸವು 05 ದಿನಗಳದ್ದಾಗಿದ್ದು ಪ್ರತಿ ಗುರುವಾರ ಆರಂಭವಾಗಿ ಸೋಮವಾರ ಬೆಳಿಗ್ಗೆ ಕೊನೆಗೊಳ್ಳುತ್ತದೆ. ಇದರ ಜೊತೆಗೆ ವಿವಿಧ ರೀತಿಯ ಪ್ರವಾಸಗಳನ್ನು ಆಯೋಜಿಸಲಾಗುತ್ತಿದ್ದು, ಪ್ರವಾಸಿಗರು ಸದರಿ ಪ್ರವಾಸಗಳ ಉಪಯೋಗವನ್ನು ಪಡೆದುಕೊಳ್ಳಬಹುದಾಗಿದೆ.

ಈ ಪ್ರವಾಸವನ್ನು ಪ್ರಸ್ತುತ ಇರುವ ಕೋವಿಡ್-19 ಸಮಸ್ಯೆಯಿಂದ ಪ್ರವಾಸಿಗರ ಆರೋಗ್ಯ ಹಿತದೃಷ್ಟಿಯಿಂದ ಮುಂಜಾಗ್ರತ ಸುರಕ್ಷತಾ ಕ್ರಮಗಳನ್ನು ಪ್ರವಾಸಗಳಲ್ಲಿ ಕೈಗೊಳ್ಳಲಾಗುವುದು. ಪ್ರವಾಸಿಗಳ ವಾಹನಗಳನ್ನು ಸ್ಯಾನಿಟೈಸ್ ಮಾಡಲಾಗುವುದು. ಪ್ರವಾಸಕ್ಕೆ ನಿಯೋಜಿಸುವ ಸಿಬ್ಬಂದಿಗಳಿಗೆ ಕಡ್ಡಾಯವಾಗಿ ಪ್ರತಿದಿನ ಥರ್ಮಲ್ ಸ್ಕ್ರೀನಿಂಗ್, ಮಾಸ್ಕ್, ಸ್ಯಾನಿಟೈಸರ್ ಬಳಸಲು ಸೂಚಿಸಲಾಗಿದ್ದು, ಸಾಮಾಜಿಕ ಅಂತರವನ್ನು ಕಾಪಾಡಲು ಸಹ ಕಡ್ಡಾಯಮಾಡಲಾಗಿದೆ.

ಈ ಪ್ರವಾಸಗಳ ಮುಂಗಡ ಬುಕಿಂಗ್ ವ್ಯವಸ್ಥೆಯನ್ನು ನಿಗಮದ ಬುಕ್ಕಿಂಗ್ ಕೌಂಟರ್‌ಗಳು, ಕೆ.ಎಸ್.ಆರ್.ಟಿ.ಸಿ. ಅವತಾರ್ ಪೋರ್ಟಲ್ ಹಾಗೂ ರೆಡ್‌ಬಸ್ ಪೋರ್ಟಲ್ ಮುಖಾಂತರ ಮಾಡಲಾಗುತ್ತಿದೆ.

ಪ್ರವಾಸದ ಬುಕಿಂಗ್‌ನ್ನು ಕೆಂಪೇಗೌಡ ಬಸ್‌ನಿಲ್ದಾಣದಲ್ಲಿನ ನಿಗಮದ ಕೌಂಟರ್, ನಿಗಮದ ಅಧಿಕೃತ ಏಜೆಂಟ್ ಮುಖಾಂತರ ಬುಕ್ಕಿಂಗ್ ಮಾಡಬಹುದಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆಯಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಆನ್‌ಲೈನ್ ಬುಕಿಂಗ್ ದೂರವಾಣಿ ಸಂಖ್ಯೆ 080–4334 4334/35, 8970650070, 8970650075 ಸಂಪರ್ಕಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.